ಮಂಗಳೂರು ವಿಶ್ವವಿದ್ಯಾನಿಲಯ

**Accredited by NAAC with `A' Grade**

ಸಂಖ್ಯೆ: ಮಂವಿ/ಪವಿ/ಸಿಆರ್.9/2016-17/ಇ.7

ಕುಲಸಚಿವ (ಪರೀಕ್ಷಾಂಗ)ರ ಕಛೇರಿ,
ಮಂಗಳಗಂಗೋತ್ರಿ - 574 199.
ದಿನಾಂಕ: 27.08.2016

## ಪ್ರಕಟಣೆ

2016ರ ಅಕ್ಟೋಬರ್ ತಿಂಗಳಲ್ಲಿ ನಡೆಯಲಿರುವ ಬಿ.ಎ.ಎಸ್.ಎಲ್.ಪಿ. ಪದವಿಯ ಕ್ರೆಡಿಟ್ ಆಧಾರಿತ ಪ್ರಥಮ, ತೃತೀಯ ಹಾಗೂ ಐದನೇ ಸೆಮಿಸ್ಟರುಗಳ ನಿಯಮಿತ / ಪುನರಾವರ್ತಿತ ಹಾಗೂ ಪ್ರಥಮ, ದ್ವಿತೀಯ ಮತ್ತು ತೃತೀಯ ವರ್ಷದ ವಾರ್ಷಿಕ ಪದ್ಧತಿಯ ಪುನರಾವರ್ತಿತ ವಿದ್ಯಾರ್ಥಿಗಳಿಗೆ ಲಿಖಿತ ಪರೀಕ್ಷೆಗಳು ದಿನಾಂಕ 26.10.2016ರಂದು ಪ್ರಾರಂಭವಾಗಲಿರುವುದು ಎಂಬುದನ್ನು ಬಿ.ಎ.ಎಸ್.ಎಲ್.ಪಿ. ಶಿಕ್ಷಣ ನೀಡುವ ಎಲ್ಲಾ ಪ್ರಾಂಶುಪಾಲರುಗಳಿಗೆ ಮತ್ತು ಸದರಿ ಪರೀಕ್ಷೆಗಳಿಗೆ ಹಾಜರಾಗುವ ಎಲ್ಲಾ ಅಭ್ಯರ್ಥಿಗಳ ಗಮನಕ್ಕೆ ಈ ಮೂಲಕ ತರಲಾಗಿದೆ.

ಸೂಚನೆಗಳು:

1. ಪ್ರಥಮ ಬಾರಿಗೆ ಪರೀಕ್ಷೆಗೆ ಹಾಜರಾಗಲಿರುವ ಅಭ್ಯರ್ಥಿಗಳು ಎಲ್ಲಾ ವಿಷಯಗಳಿಗೆ ಮತ್ತು ಪತ್ರಿಕೆಗಳಿಗೆ ಕಡ್ಡಾಯವಾಗಿ ನೋಂದಣಿ ಮಾಡತಕ್ಕದ್ದು. ಕ್ರೆಡಿಟ್ ಆಧಾರಿತ ಸೆಮಿಸ್ಟರ್ ಪದ್ಧತಿಯ ಹಾಗೂ ವಾರ್ಷಿಕ ಪದ್ಧತಿಯ ಎಲ್ಲಾ ವಿದ್ಯಾರ್ಥಿಗಳು ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಸಲ್ಲಿಸುವುದು. ಕ್ರೆಡಿಟ್ ಆಧಾರಿತ ಸೆಮಿಸ್ಟರ್ ಸ್ಕೀಂನ ವಿದ್ಯಾರ್ಥಿಗಳು ಆನ್‌ಲೈನ್ ಪರೀಕ್ಷಾ ಅರ್ಜಿಯಲ್ಲಿ ಕಡ್ಡಾಯ ವಿಷಯ (ಫೌಂಡೇಶನ್ ಕೋರ್ಸ್) ಹಾಗೂ ಪಠ್ಯೇತರ ವಿಷಯ (ಇ.ಸಿ./ಸಿ.ಸಿ.)ಗಳನ್ನು ಕಡ್ಡಾಯವಾಗಿ ನಮೂದಿಸತಕ್ಕದ್ದು.

2. ಸವಿವರವಾದ ವೇಳಾಪಟ್ಟಿಯನ್ನು ಶೀಘ್ರದಲ್ಲಿ ಪ್ರಕಟಿಸಲಾಗುವುದು.

3. ಸಂಬಂಧಪಟ್ಟ ವಿಷಯಗಳ ಪ್ರಾಯೋಗಿಕ ಪರೀಕ್ಷೆಗಳು ಲಿಖಿತ ಪರೀಕ್ಷೆಗಳ ಮುಂಚಿತವಾಗಿ ನಡೆಯಲಿರುವುದು.

4. ಆನ್‌ಲೈನ್ ಎಪ್ಲಿಕೇಶನ್ ಪ್ರೊಸೆಸಿಂಗ್ ಶುಲ್ಕ ರೂ. 100.00 (ರೂಪಾಯಿ ನೂರು)ನ್ನು ಕಾಲೇಜು ಮುಖ್ಯಸ್ಥರಲ್ಲಿ ಪಾವತಿಸಿ ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸುವುದು. ಅಪೂರ್ಣವಾದ ಅರ್ಜಿಗಳನ್ನು ತಿರಸ್ಕರಿಸಲಾಗುವುದು. *ಕಾಲೇಜುಗಳು ಆನ್‌ಲೈನ್ ಮೂಲಕ ಪರೀಕ್ಷಾ ಅರ್ಜಿ ಸಲ್ಲಿಸುವಾಗ ಪ್ರಶ್ನೆ ಪತ್ರಿಕೆ ಕೋರಿಕೆ ಪಟ್ಟಿಯಲ್ಲಿರುವ ವಿಷಯ ಹಾಗೂ ಕೋಡ್ ಸಂಖ್ಯೆಯನ್ನು ಎಚ್ಚರಿಕೆಯಿಂದ ನಮೂದಿಸತಕ್ಕದ್ದು. ಈ ಬಗ್ಗೆ ಪ್ರಾಂಶುಪಾಲರು ಹೆಚ್ಚಿನ ಜಾಗರೂಕತೆ ವಹಿಸತಕ್ಕದ್ದು.*

5. *ಕುಲಸಚಿವರಿಂದ ಪ್ರವೇಶಾತಿ ಮತ್ತು ವರ್ಗಾವಣೆ ಪ್ರವೇಶಾತಿ ಅನುಮೋದಿಸಲ್ಪಡದ ವಿದ್ಯಾರ್ಥಿಗಳು ಮತ್ತು ಕಡಿಮೆ ಹಾಜರಾತಿ ಪಡೆದ ವಿದ್ಯಾರ್ಥಿಗಳು ಪರೀಕ್ಷೆಗೆ ಅರ್ಜಿಗಳನ್ನು ಸಲ್ಲಿಸಲು ಅನರ್ಹರಾಗಿರುತ್ತಾರೆ.*

6. ವಿದ್ಯಾರ್ಥಿಗಳಿಗೆ ತಮಗೆ ಇಚ್ಛೆ ಬಂದಂತೆ ಪರೀಕ್ಷಾ ಕೇಂದ್ರವನ್ನು ಆರಿಸಲು ಅವಕಾಶವಿರುವುದಿಲ್ಲ.

7. *ವಿಶ್ವವಿದ್ಯಾನಿಲಯದ ವಿನಿಯಮ (ರೆಗ್ಯುಲೇಶನ್) ಪ್ರಕಾರ ಪರೀಕ್ಷೆಗೆ ಹಾಜರಾಗಲು ಅರ್ಹತೆಯನ್ನು ಹೊಂದಿದ ವಿದ್ಯಾರ್ಥಿಗಳಿಗೆ ಮಾತ್ರ ಆನ್‌ಲೈನ್ ಮುಖಾಂತರ ಪರೀಕ್ಷಾ ಅರ್ಜಿಯನ್ನು ಸಲ್ಲಿಸಲು ಅನುಮತಿಯನ್ನು ನೀಡಲಾಗಿದೆ. ಕುಲಸಚಿವರ ಅಧಿಸೂಚನೆ ದಿನಾಂಕ 24.04.2008 ರಂತೆ 2010 ಹಾಗೂ ಅದರ ಹಿಂದಿನ ಸಾಲಿನ ವಿದ್ಯಾರ್ಥಿಗಳು ವಿಶ್ವವಿದ್ಯಾನಿಲಯ ನಿಗದಿಪಡಿಸಿದ ವಿಶೇಷ ಪರೀಕ್ಷಾ ಶುಲ್ಕ ಪಾವತಿಸಿ, ಪರೀಕ್ಷೆಗಳಿಗೆ ಹಾಜರಾಗಲು ಅರ್ಹರಾಗಿರುತ್ತಾರೆ. ಸದ್ರಿ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು. ವಿಶ್ವವಿದ್ಯಾನಿಲಯದ ಪರೀಕ್ಷಾ ನಿಯಮಾವಳಿಗಳಿಗೆ ವಿರುದ್ಧವಾಗಿ ಅನರ್ಹ ವಿದ್ಯಾರ್ಥಿಗಳಿಗೆ ಪರೀಕ್ಷೆಗೆ ಹಾಜರಾಗಲು ಅವಕಾಶ ನೀಡಿದ್ದಲ್ಲಿ ಸಂಬಂಧಿತ ಕಾಲೇಜಿನ ಪ್ರಾಂಶುಪಾಲರನ್ನೇ ಹೊಣೆಗಾರರನ್ನಾಗಿ ಮಾಡಲಾಗುವುದು.*

8. ಇನ್ನಿತರ ಕಾರ್ಯ ಚಟುವಟಿಕೆಗಳಲ್ಲಿ ಭಾಗವಹಿಸಿರುವುದರಿಂದ (ಕಾಲೇಜು ಮತ್ತು ವಿಶ್ವವಿದ್ಯಾನಿಲಯವನ್ನು ಪ್ರತಿನಿಧಿಸಿ) ಕಾಲೇಜುಗಳಲ್ಲಿ ಹಾಜರಿಲ್ಲದ ವಿದ್ಯಾರ್ಥಿಗಳು ಕೂಡಾ ನಿಗದಿತ ಶುಲ್ಕದೊಂದಿಗೆ ಆನ್‌ಲೈನ್ ಮುಖಾಂತರ ಪರೀಕ್ಷಾ ಅರ್ಜಿಯನ್ನು ಸಲ್ಲಿಸುವಂತೆ (ಇತರ ವಿದ್ಯಾರ್ಥಿಗಳೊಂದಿಗೆ) ಸಂಬಂಧಪಟ್ಟ ಕಾಲೇಜಿನ ಪ್ರಾಂಶುಪಾಲರುಗಳು ನಿಗಾವಹಿಸತಕ್ಕದ್ದು.

9. ಪರೀಕ್ಷೆಗಳಿಗೆ ಹಾಜರಾಗುವ ಅಭ್ಯರ್ಥಿಗಳ ಪರೀಕ್ಷಾ ಹಣಕಾಸು ತಖ್ತೆ ಹಾಗೂ ಪರೀಕ್ಷಾರ್ಥಿಗಳ ಪಟ್ಟಿಯನ್ನು ಅನುಮೋದಿಸಲ್ಪಟ್ಟ ಪ್ರವೇಶಾನುಮೋದನೆ ಪಟ್ಟಿಯಲ್ಲಿ ಸೂಚಿಸಿರುವ ಮಾದರಿಯಲ್ಲಿ ಯಾವುದೇ ಕಾಗುಣಿತ ವ್ಯತ್ಯಾಸವಿಲ್ಲದಂತೆ ದಾಖಲಿಸಬೇಕು.

10. ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕವನ್ನು (ದಂಡಶುಲ್ಕ ರಹಿತ ಮತ್ತು ವಿವಿಧ ದರಗಳಲ್ಲಿ ದಂಡಶುಲ್ಕ ಸಹಿತ) ಕಾಲೇಜಿನ ಮುಖ್ಯಸ್ಥರಲ್ಲಿ ಪಾವತಿ ಮಾಡಲು ಈ ಕೆಳಕಂಡ ದಿನಾಂಕಗಳನ್ನು ನಿಗದಿಪಡಿಸಲಾಗಿದೆ.

<u>ಪರೀಕ್ಷಾ ಶುಲ್ಕವನ್ನು ಕಟ್ಟಲು ನಿಗದಿಪಡಿಸಲಾದ ಅಂತಿಮ ದಿನಾಂಕ:</u>

| | | |
|---|---|---|
| ದಂಡಶುಲ್ಕ ರಹಿತ | . . . | 15.09.2016 |
| ದಂಡಶುಲ್ಕ ದಿನವೊಂದಕ್ಕೆ ರೂ. 45/- ರಂತೆ | . . . | 16.09.2016 ರಿಂದ 22.09.2016ರವರೆಗೆ |
| ದಂಡಶುಲ್ಕ ದಿನವೊಂದಕ್ಕೆ ರೂ. 80/- ರಂತೆ | . . . | 23.09.2016 ರಿಂದ 29.09.2016ರವರೆಗೆ |

11. ಒಮ್ಮೆ ಪಾವತಿಸಲಾದ ಪರೀಕ್ಷಾ ಶುಲ್ಕವನ್ನು ಯಾವ ಕಾರಣಕ್ಕೂ ಮರುಪಾವತಿ ಮಾಡಲಾಗುವುದಿಲ್ಲ ಹಾಗೂ ಅದನ್ನು ಮುಂದಿನ ಪರೀಕ್ಷೆಗಳಿಗೆ ಸರಿದೂಗಿಸಿಕೊಳ್ಳಲಾಗುವುದಿಲ್ಲ.

12. *ನವೆಂಬರ್ 2015 / ಮೇ 2016ರ ಪರೀಕ್ಷೆಗಳ ಫಲಿತಾಂಶ ಪ್ರಕಟವಾಗದ ವಿದ್ಯಾರ್ಥಿಗಳು ಮತ್ತು ಮರು ಮೌಲ್ಯಮಾಪನ ಮತ್ತು ಮರು ಸಂಕಲನಕ್ಕೆ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳು ಮತ್ತು ಫಲಿತಾಂಶ ಪ್ರಕಟವಾಗಲು ಬಾಕಿ ಇರುವ ವಿದ್ಯಾರ್ಥಿಗಳು ಸಹ ಪರೀಕ್ಷೆಗೆ ನಿಗದಿಪಡಿಸಿದ ದಿನಾಂಕದೊಳಗಾಗಿ ಪರೀಕ್ಷಾ ಶುಲ್ಕದೊಂದಿಗೆ ಅಭ್ಯರ್ಥನ ಪತ್ರವನ್ನು ಸಲ್ಲಿಸತಕ್ಕದ್ದು. ಯಾವುದೇ ಕಾರಣಕ್ಕೂ ಅಂತಹ ಅಭ್ಯರ್ಥಿಗಳಿಗೆ ಪಾವತಿ ದಿನಾಂಕವನ್ನು ಮುಂದೂಡಲಾಗುವುದಿಲ್ಲ. ಪರೀಕ್ಷಾ ಅವ್ಯವಹಾರಗಳಲ್ಲಿ ಭಾಗಿಯಾಗಿ, ವಿಶ್ವವಿದ್ಯಾನಿಲಯದ ನಿರ್ಣಯ ಬಾಕಿ ಇರುವಂತಹ ಅಭ್ಯರ್ಥಿಗಳು ಸಹ ನಿಗದಿತ ಸಮಯದೊಳಗೆ ಶುಲ್ಕವನ್ನು ಪಾವತಿಸಬೇಕು ಮತ್ತು ಅಭ್ಯರ್ಥನ ಪತ್ರವನ್ನು ಸಲ್ಲಿಸಬೇಕು.*

13. ಅಭ್ಯರ್ಥಿಗಳು ತಮ್ಮ ಪರೀಕ್ಷಾ ಶುಲ್ಕವನ್ನು ಕಾಲೇಜು ಆಫೀಸಿನಲ್ಲಿ ಪಾವತಿಸಬೇಕು ಮತ್ತು ಆನ್‌ಲೈನ್ ಮುಖಾಂತರ ಅರ್ಜಿಯನ್ನು ಸಲ್ಲಿಸಬೇಕು. *ಶುಲ್ಕವನ್ನು ಪಾವತಿಸಿದ ಬಗ್ಗೆ ಪಡೆದ ರಶೀದಿಯನ್ನು ಪ್ರತ್ಯೇಕವಾಗಿ ಕಳುಹಿಸಿಕೊಡಬೇಕು* ಹಾಗೂ ಮೊಬಲಗು, ದಿನಾಂಕ ಮತ್ತು ರಶೀದಿ ಸಂಖ್ಯೆಗಳನ್ನು ಆನ್‌ಲೈನ್ ಪರೀಕ್ಷಾ ಅರ್ಜಿಯಲ್ಲಿ ವಿವರವಾಗಿ ನಮೂದಿಸಬೇಕು.

14. ಪರೀಕ್ಷಾ ಶುಲ್ಕದ ದರ :

| | | |
|---|---|---|
| ಪ್ರತಿ ವರ್ಷದ ಪೂರ್ಣ ಪರೀಕ್ಷೆಗೆ | . . . | ರೂ. 1,320/- |
| ಪ್ರತಿ ಸೆಮಿಸ್ಟರ್‌ನ ಪೂರ್ಣ ಪರೀಕ್ಷೆಗೆ | . . . | ರೂ. 1,320/- |
| ಪ್ರತಿ ವಿಷಯಕ್ಕೆ | . . . | ರೂ. 350/- |

ಮೇಲೆ ನಿಗದಿಪಡಿಸಿದ ಪರೀಕ್ಷಾ ಶುಲ್ಕದ ಜೊತೆಗೆ ಪ್ರತೀ ಪರೀಕ್ಷೆಗೆ ಆನ್‌ಲೈನ್ ಎಪ್ಲಿಕೇಷನ್ ಪ್ರೊಸೆಸಿಂಗ್ ಶುಲ್ಕ ರೂ.100.00 ಮತ್ತು ರೂ.210.00 ಅಂಕಪಟ್ಟಿ ಶುಲ್ಕಗಳನ್ನು ಪಾವತಿಸತಕ್ಕದ್ದು.

15. ವಿದ್ಯಾರ್ಥಿಗಳು ಪರೀಕ್ಷೆಯ ಯಾವುದಾದರೂ ಭಾಗ/ ಭಾಗಗಳಿಗೆ ಪಾವತಿಸಲಿರುವ ಒಟ್ಟು ಪರೀಕ್ಷಾ ಶುಲ್ಕವು ನಿಗದಿತ ಪೂರ್ಣ ಪರೀಕ್ಷಾ ಶುಲ್ಕವನ್ನು ಮೀರಬಾರದು.

16. ವಿದೇಶಿ ಅಭ್ಯರ್ಥಿಗಳು ನಿಗದಿಪಡಿಸಿದ ಎಲ್ಲಾ ಶುಲ್ಕಗಳ ಮೂರು ಪಟ್ಟು ಶುಲ್ಕವನ್ನು ಪಾವತಿಸತಕ್ಕದ್ದು.

17. ಅ) ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಕ್ಕೆ ಸೇರಿದ ಕರ್ನಾಟಕ ರಾಜ್ಯದ ಅಭ್ಯರ್ಥಿಗಳು ಮಾತ್ರ ಪರೀಕ್ಷಾ ಶುಲ್ಕ ವಿನಾಯಿತಿ ಪಡೆಯಲು ಅರ್ಹರಾಗಿರುತ್ತಾರೆ.

ಆ) ಪ್ರ. ವರ್ಗ-1 (ಆದಾಯ ಮಿತಿ ರೂ. 2,50,000/- ಮೀರದ)ಕ್ಕೆ ಸೇರಿದ ಕರ್ನಾಟಕ ರಾಜ್ಯದ ಅಭ್ಯರ್ಥಿಗಳು ಮಾತ್ರ ಪರೀಕ್ಷಾ ಶುಲ್ಕ ವಿನಾಯಿತಿ ಪಡೆಯಲು ಅರ್ಹರಾಗಿರುತ್ತಾರೆ.

ಇ) ಕುಟುಂಬದ ವಾರ್ಷಿಕ ವರಮಾನ ರೂ. 1,00,000/- ಆದಾಯ ಮಿತಿಯೊಳಗಿರುವ ಕರ್ನಾಟಕ ರಾಜ್ಯದ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳು ಮಾತ್ರ ಪರೀಕ್ಷಾ ಶುಲ್ಕ ವಿನಾಯಿತಿ ಪಡೆಯಲು ಅರ್ಹರಾಗಿರುತ್ತಾರೆ.

ಈ) ಪುನರಾವರ್ತಿತ ವಿದ್ಯಾರ್ಥಿಗಳು ಶುಲ್ಕ ವಿನಾಯಿತಿ ಪಡೆಯಲು ಅರ್ಹರಾಗಿರುವುದಿಲ್ಲ. ಆದರೆ ಎಲ್ಲಾ ಅಭ್ಯರ್ಥಿಗಳು ಪರೀಕ್ಷಾ ವಿನಾಯಿತಿ ಪಡೆಯುವ ಅಭ್ಯರ್ಥಿಗಳು ಸೇರಿದಂತೆ ರೂ. 210/- ಅಂಕಪಟ್ಟಿ ಶುಲ್ಕ ಮತ್ತು ರೂ. 100/- ಆನ್‌ಲೈನ್ ಎಪ್ಲಿಕೇಶನ್ ಪ್ರೊಸೆಸಿಂಗ್ ಶುಲ್ಕವನ್ನು ಪಾವತಿಸತಕ್ಕದ್ದು.

18. ವಿದ್ಯಾರ್ಥಿಗಳಿಂದ ಪಡೆದ ಒಟ್ಟು ಶುಲ್ಕವನ್ನು ಈ ಕೆಳಗಿನ ಕೋಡ್ ಸಂಖ್ಯೆಗಳಲ್ಲಿ ಬ್ಯಾಂಕ್ ಚಲನ್ ಮುಖಾಂತರ ಮಂಗಳೂರು ವಿಶ್ವವಿದ್ಯಾನಿಲಯದ ನಿಧಿಗೆ ಪಾವತಿಸತಕ್ಕದ್ದು.
ಅ) ಅರ್ಜಿ ಶುಲ್ಕ 008/14
ಆ) ಪರೀಕ್ಷಾ ಶುಲ್ಕ 008/23
ಇ) ಅಂಕಪಟ್ಟಿ ಶುಲ್ಕ 008/24

19. *ಅಕ್ಟೋಬರ್ 2016ರ ಪರೀಕ್ಷೆಗೆ ಸಂಬಂಧಿಸಿದ ಆಂತರಿಕ ಮೌಲ್ಯಮಾಪನದ ಅಂಕಗಳ ವಿವರಗಳನ್ನು ಆನ್‌ಲೈನ್ ಮುಖಾಂತರ ಸಲ್ಲಿಸಿ, ಅಂತಿಮ ದೃಢೀಕೃತ ಪ್ರತಿಯನ್ನು (ದ್ವಿಪ್ರತಿಯಲ್ಲಿ) ಪರೀಕ್ಷೆ ಪ್ರಾರಂಭವಾಗುವುದಕ್ಕೆ 15 ದಿನಗಳಿಗೆ ಮುಂಚಿತವಾಗಿ ತಪ್ಪದೆ ಸಲ್ಲಿಸಲು ತಿಳಿಸಲಾಗಿದೆ.*

20. ಈ ಕೆಳಗೆ ನಮೂದಿಸಿರುವ ತಖ್ತೆಗಳನ್ನು ಮತ್ತು ದಾಖಲೆ ಪತ್ರಗಳನ್ನು ತಪ್ಪದೇ ಈ ಕಛೇರಿಗೆ ದಿನಾಂಕ: *04.10.2016ರ* ಒಳಗಾಗಿ ಕಳುಹಿಸಿಕೊಡುವುದು.

ಅ) ಅಭ್ಯರ್ಥನ ಪಟ್ಟಿ ದ್ವಿಪ್ರತಿಗಳಲ್ಲಿ.

ಆ) 2006 ಹಾಗೂ ಅದರ ಹಿಂದಿನ ಸಾಲಿನ ಪುನರಾವರ್ತಿತ ವಿದ್ಯಾರ್ಥಿಗಳ ಅಭ್ಯರ್ಥನ ಪಟ್ಟಿಯನ್ನು Manual ಆಗಿ ಪ್ರತ್ಯೇಕವಾಗಿ ಸಲ್ಲಿಸುವುದು (ದ್ವಿಪ್ರತಿಗಳಲ್ಲಿ).

ಇ) ಕ್ರೋಢೀಕೃತ ಪರೀಕ್ಷಾ ಶುಲ್ಕವನ್ನು ಪಾವತಿಸಿದ ಒಂದು ಚಲನ್.

ಈ) ಹಣಕಾಸು ತ:ಖ್ತೆ

ಉ) ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ನೀಡಲಾದ ಶುಲ್ಕ ವಿನಾಯಿತಿ ತ:ಖ್ತೆಗಳು (ಮೂರು ಪ್ರತಿಗಳಲ್ಲಿ). ಅಂತಹ ಯಾವುದೇ ಬೇಡಿಕೆಗಳು ಇಲ್ಲದಿದ್ದಲ್ಲಿ ಶೂನ್ಯ ವರದಿಯನ್ನು ತಪ್ಪದೆ ಕಳುಹಿಸಿಕೊಡಬೇಕು.

ಊ) ಪ್ರವರ್ಗ-1ಕ್ಕೆ ಸೇರಿದ (ಆದಾಯ ಮಿತಿ ರೂ.2,50,000/- ಮೀರದ) ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕ ವಿನಾಯಿತಿ ಬಗ್ಗೆ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆಗೆ ಕ್ಲೇಮು ಸಲ್ಲಿಸಿ ಸ್ವೀಕೃತಿ ಪಡೆದ ಶುಲ್ಕ ಮರುಭರಣೆಯ ಬಿಲ್ಲಿನ ಪ್ರತಿಯನ್ನು (ಮೂರು ಪ್ರತಿಗಳು) ಕಳುಹಿಸಿಕೊಡಬೇಕು. ಇಂತಹ ಯಾವುದೇ ಬೇಡಿಕೆಗಳು ಇಲ್ಲದಿದ್ದಲ್ಲಿ ಶೂನ್ಯ ವರದಿಯನ್ನು ಕಳುಹಿಸುವುದು.

ಋ) ಹಿಂದುಳಿದ ವರ್ಗಕ್ಕೆ ಸೇರಿದ (ಕುಟುಂಬದ ವಾರ್ಷಿಕ ವರಮಾನ 1,00,000/- ಮೀರದ) ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕ ವಿನಾಯಿತಿ ಬಗ್ಗೆ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆಗೆ ಕ್ಲೇಮು ಸಲ್ಲಿಸಿ ಸ್ವೀಕೃತಿ ಪಡೆದ ಶುಲ್ಕ ಮರುಭರಣೆಯ ಬಿಲ್ಲಿನ ಪ್ರತಿಯನ್ನು (ಮೂರು ಪ್ರತಿಗಳು) ಕಳುಹಿಸಿಕೊಡಬೇಕು. ಇಂತಹ ಯಾವುದೇ ಬೇಡಿಕೆಗಳು ಇಲ್ಲದಿದ್ದಲ್ಲಿ ಶೂನ್ಯ ವರದಿಯನ್ನು ಕಳುಹಿಸುವುದು.

ೠ) ಪ್ರತೀ ಸೆಮಿಸ್ಟರ್‌ನ ಪರೀಕ್ಷೆಗೆ ಹಾಜರಾಗುವ ವಿದ್ಯಾರ್ಥಿಗಳ ಸಂಖ್ಯೆಯನ್ನು ಸೂಚಿಸುವ ತ:ಖ್ತೆ (ಲಗತ್ತಿಸಲಾದ ನಮೂನೆಯಲ್ಲಿ).

ಎ) ಇತರ ಕಾಲೇಜು/ ವಿಶ್ವವಿದ್ಯಾನಿಲಯಗಳಿಂದ ವರ್ಗಾವಣೆ ಪ್ರವೇಶಾತಿ ಹೊಂದಿದ ವಿದ್ಯಾರ್ಥಿಗಳ ಬಗ್ಗೆ ಪ್ರತ್ಯೇಕ ವಿವರ ಸಲ್ಲಿಸುವುದು.

ಏ) ಪ್ರಶ್ನೆ ಪತ್ರಿಕೆ ಕೋರಿಕೆ ಪಟ್ಟಿಯನ್ನು ಮ್ಯಾನ್ಯುವಲ್ ಆಗಿ ತಯಾರಿಸಿ *ದಿನಾಂಕ 01.10.2016ರೊಳಗೆ* ಈ ಕಛೇರಿಗೆ ತಪ್ಪದೆ ಸಲ್ಲಿಸುವುದು

ಟಿಪ್ಪಣಿ: ಪಾರ 20ರಲ್ಲಿ ಸೂಚಿಸಿರುವ ಅವಶ್ಯ ದಾಖಲೆ ಪತ್ರಗಳಿಲ್ಲದ ಅಭ್ಯರ್ಥಿಗಳ ಪಟ್ಟಿಯನ್ನು ತಿರಸ್ಕರಿಸಲಾಗುವುದು.

ಕುಲಸಚಿವರು (ಪರೀಕ್ಷಾಂಗ)

ಅಡಕ: ವಿದ್ಯಾರ್ಥಿ ಸಂಖ್ಯೆಯನ್ನು ಸೂಚಿಸುವ ತ:ಖ್ತೆ.

ರಿಗೆ:

1) ಪ್ರಾಂಶುಪಾಲರು, ಡಾ.ಎಂ.ವಿ.ಶೆಟ್ಟಿ ಕಾಲೇಜ್ ಆಫ್ ಸ್ಪೀಚ್ ಆ್ಯಂಡ್ ಹಿಯರಿಂಗ್, ಎನ್‌ಹೆಚ್-66, ಮಾಲಾಡಿ ಕೋರ್ಟ್, ಕಾವೂರು, ಮಂಗಳೂರು - 575 015,
2) ಪ್ರಾಂಶುಪಾಲರು, ಮಂಗಳೂರು ಅಕಾಡೆಮಿ ಆಫ್ ಪ್ರೊಫೆಶನಲ್ ಸ್ಟಡೀಸ್, ಚಿನ್ಮಯ ಲೇನ್, ಬಂಟ್ಸ್ ಹಾಸ್ಟೆಲ್, ಸಿ.ವಿ.ನಾಯಕ್ ಹಾಲ್ ಎದುರುಗಡೆ, ಕದ್ರಿ ರೋಡ್, ಮಂಗಳೂರು-3.
3) ಪ್ರಾಂಶುಪಾಲರು, ನಿಟ್ಟೆ ಇನ್‌ಸ್ಟಿಟ್ಯೂಟ್ ಆಫ್ ಸ್ಪೀಚ್ & ಹಿಯರಿಂಗ್, ಡಿಪಾರ್ಟ್‌ಮೆಂಟ್ ಆಫ್ ಸ್ಪೀಚ್ ಪ್ಯಾತೊಲಜಿ & ಹಿಯರಿಂಗ್, ಕೆ.ಎಸ್ ಹೆಗ್ಡೆ ಮೆಡಿಕಲ್ ಸಾಯನ್ಸ್ ಕಾಂಪ್ಲೆಕ್ಸ್, ದೇರಳಕಟ್ಟೆ, ಮಂಗಳೂರು.
4) ಪ್ರಾಂಶುಪಾಲರು, ಫಾದರ್ ಮುಲ್ಲರ್ ಕಾಲೇಜು, ಕಂಕನಾಡಿ, ಮಂಗಳೂರು.

ಪ್ರತಿ:

1. ಕುಲಸಚಿವರು/ ಹಣಕಾಸು ಅಧಿಕಾರಿ, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ.
2. ವಿಶೇಷಾಧಿಕಾರಿ(ಪರೀಕ್ಷಾಂಗ), ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ.
3. ಸಹಾಯಕ ಕುಲಸಚಿವರು(ಪರೀಕ್ಷಾಂಗ) 1 & 2 ಮಂಗಳೂರು ವಿಶ್ವವಿದ್ಯಾನಿಲಯ.
4. ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿ, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ.
5. ಜಂಟಿ ನಿರ್ದೇಶಕರು, ಕಾಲೇಜು ಶಿಕ್ಷಣ ನಿರ್ದೇಶನಾಲಯ, ವಿಶ್ವವಿದ್ಯಾನಿಲಯ ಕಾಲೇಜು ಆವರಣ, ಮಂಗಳೂರು.
6. ಜಿಲ್ಲಾ ಸಮಾಜ ಕಲ್ಯಾಣ ಅಧಿಕಾರಿ, ಜಿಲ್ಲಾಧಿಕಾರಿಯವರ ಕಛೇರಿ ಬಳಿ, ದಕ್ಷಿಣ ಕನ್ನಡ, ಮಂಗಳೂರು.
7. ಅಧೀಕ್ಷಕರು ಎಸ್.1, ಎಸ್.2, ಎಸ್.3, ಎಸ್.4, ಎಸ್.6.
8. ಸಿಸ್ಟಂ ಅನಾಲಿಸ್ಟ್, ಕಂಪ್ಯೂಟರ್ ವಿಭಾಗ, ಕುಲಸಚಿವ (ಪರೀಕ್ಷಾಂಗ)ರ ಕಛೇರಿ, ಮಂಗಳೂರು ವಿಶ್ವವಿದ್ಯಾನಿಲಯ.
9. ಕುಲಸಚಿವ (ಪರೀಕ್ಷಾಂಗ)ರ ಆಪ್ತ ಸಹಾಯಕರು, ಮಂಗಳೂರು ವಿಶ್ವವಿದ್ಯಾನಿಲಯ, ಮಂಗಳಗಂಗೋತ್ರಿ.
10. ಇ.9/ಇ.11/ಇ30 ಕಾರ್ಯ ನಿರ್ವಾಹಕರು.